ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಭೂ ಒಡೆತನ ಯೋಜನೆಯಡಿ ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ದಿ ನಿಗಮದಿಂದ ಸಾಲ ಸೌಲಭ್ಯ ಕುರಿತು

ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು):-

135 (111) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಜಿಲ್ಲೆಯಲ್ಲಿ ಕಳೆದ 01 ವರ್ಷದ ಭೂ ಒಡೆತನಗಳಲ್ಲಿ ಯೋಜನೆಯಡಿ ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ದಿ ನಿಗಮದಿಂದ ಸಾಲ ಸೌಲಭ್ಯ ಕೋರಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; (ಕಲಬುರಗಿ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಪೈಕಿ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿರುತ್ತದೆ; (ಕಲಬುರಗಿ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ವಿಧಿಸಿದ ಷರತ್ತುಗಳನ್ನು ಉಲ್ಲಂಘನೆ ಮಾಡಿರುವವರ ವಿರುದ್ದ ದಾಖಲಾದ ಪ್ರಕರಣಗಳೆಷ್ಟು ; ಮತ್ತು ಸದರಿಯವರ ವಿರುದ್ದ ಕೈಗೊಂಡ ಕ್ರಮಗಳೇನು ?